# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 141 |
| ಸದಸ್ಯರ ಹೆಸರು | : ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 05.03.2025 |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ನಡೆದಿರುವ ಸರ್ಕಾರಿ ಭೂಮಿ ಒತ್ತುವರಿ ಪ್ರಕರಣಗಳೆಷ್ಟು; ಈ ಪೈಕಿ ಒತ್ತುವರಿ ತೆರವು ಮಾಡಿ ಮರು ವಶಪಡಿಸಿಕೊಂಡಿರುವ ಭೂಮಿ ಎಷ್ಟು; ಈ ಭೂಮಿಯ ಒಟ್ಟು ಮೌಲ್ಯ ಎಷ್ಟು; (ಜಿಲ್ಲಾವಾರು ಪೂರ್ಣ ವಿವರ ನೀಡುವುದು) | ಸರ್ಕಾರಿ ಭೂಮಿ ಒತ್ತುವರಿ ಪ್ರಕರಣಗಳ ಸಂಖ್ಯೆ: 145389. ಸರ್ಕಾರಿ ಭೂಮಿ ಒತ್ತುವರಿ ತೆರವು ಮಾಡಿ ಮರು ವಶಪಡಿಸಿಕೊಂಡಿರುವ ಒಟ್ಟು ಭೂಮಿ 278819-10 ಎಕರೆ/ಗುಂಟೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1ರಲ್ಲಿ ನೀಡಲಾಗಿದೆ.<br><br>ಈ ಭೂಮಿಗಳ ಮಾರ್ಗಸೂಚಿ ಮತ್ತು ಮಾರುಕಟ್ಟೆ ಬೆಲೆಯಂತೆ ವಿವಿಧ ಜಿಲ್ಲೆಯಲ್ಲಿ ವಿವಿಧ ಗ್ರಾಮಗಳ ಸರ್ಕಾರಿ ಜಮೀನಿಗೆ ಒಂದೊಂದು ಮೌಲ್ಯವನ್ನು ನಿಗದಿಪಡಿಸಲಾಗಿರುತ್ತದೆ. |
| ಆ) | ಒತ್ತುವರಿದಾರರ ವಿರುದ್ಧ ಕೈಗೊಂಡಿರುವ ಕ್ರಮಗಳೇನು; ಒತ್ತುವರಿಯಿಂದ ತೆರವುಗೊಂಡಿರುವ ಜಾಗವನ್ನು ರಕ್ಷಿಸಲು ಕೈಗೊಂಡಿರುವ ಕ್ರಮಗಳೇನು; | ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಜನವರಿ-2025ರ ಅಂತ್ಯಕ್ಕೆ ಒಟ್ಟು 24477 ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 19292 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. 5185 ಪ್ರಕರಣಗಳು ಬಾಕಿ ಇದೆ. ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ವಿವಿಧ ಪ್ರಕರಣಗಳಲ್ಲಿ ಈವರೆಗೂ 92 ಜನರಿಗೆ ಒಂದು ವರ್ಷದಂತೆ ಶಿಕ್ಷೆ ಹಾಗೂ ದಂಡ ವಿಧಿಸಲಾಗಿದೆ.<br><br>ರಾಜ್ಯದಲ್ಲಿ ಕಂದಾಯ ಇಲಾಖೆಯಡಿ ಬರುವ ಸರ್ಕಾರಿ ಜಮೀನಿನ ಸಂರಕ್ಷಣೆಗಾಗಿ ಸರ್ಕಾರವು ಈ ಕೆಳಕಂಡಂತೆ ಕ್ರಮ ಕೈಗೊಂಡಿರುತ್ತದೆ.<br><br>1. ಭೂಮಿ ತಂತ್ರಾಂಶದಲ್ಲಿ ಯಾವುದೇ ಆರ್.ಟಿ.ಸಿ ಯನ್ನು ಸರ್ಕಾರದ ಹೆಸರಿನಿಂದ ಖಾಸಗಿ ವ್ಯಕ್ತಿಯ ಹೆಸರಿಗೆ ಬದಲಾವಣೆ ಮಾಡುವ ಮೊದಲು ತಹಶೀಲ್ದಾರರ ಅನುಮೋದನೆ ಕಡ್ಡಾಯವಾಗಿರುತ್ತದೆ.<br>2. ಯಾವುದೇ ಹೊಸ ಸರ್ವೆ ನಂಬರ್ ಸೃಜಿಸಲು ಅಥವಾ ಸರ್ವೆ ನಂಬರ್ ತೆಗೆದು ಹಾಕಲು(ಡಿಲೀಷನ್) ಮಾಡಲು ಭೂಮಿ ತಂತ್ರಾಂಶದಲ್ಲಿ ಜಿಲ್ಲಾಧಿಕಾರಿಗಳು ಅಥವಾ ಉಪವಿಭಾಗಾಧಿಕಾರಿಯವರ ಆದೇಶದೊಂದಿಗೆ ಕ್ರಮವಹಿಸಲು ಅವಕಾಶವನ್ನು ನೀಡಲಾಗಿದೆ. |

| | | |
|---|---|---|
| | | 3. ಯಾವುದೇ ಭೂ ಮಂಜೂರಾತಿ ಸಂದರ್ಭದಲ್ಲಿ ನಮೂನೆ 1 ರಿಂದ 5 ತುಂಬಲು ಇದ್ದ Manual ಪದ್ಧತಿಯನ್ನು ತೆಗೆದುಹಾಕಿದ್ದು ತಂತ್ರಾಂಶದ ಮೂಲಕ ಭರ್ತಿ ಮಾಡಲು ಅವಕಾಶ ಮಾಡಲಾಗಿದೆ.<br>4. ಕಾವೇರಿ ಹಾಗೂ ಭೂಮಿ ತಂತ್ರಾಂಶ ಜೋಡಣೆಯಾಗಿರುವುದರಿಂದ ಯಾವುದೇ ಸರ್ಕಾರಿ ಭೂಮಿಯನ್ನು ಅನಧಿಕೃತವಾಗಿ ಮಾರಾಟ ಮಾಡಲು ಹಾಗೂ ಖರೀದಿಸಲು ಅವಕಾಶವಿರುವುದಿಲ್ಲ.<br>5. ಯಾವುದೇ ಸರ್ಕಾರಿ ಭೂಮಿ ಮೇಲೆ ಅನಧಿಕೃತವಾಗಿ ಮಾಡಿರುವ ಖಾತೆ ಬದಲಾವಣೆಯ ಸಂಬಂಧ ಕರ್ನಾಟಕ ಭೂಕಂದಾಯ ಕಾಯ್ದೆ 1964ರನ್ವಯ ಜಿಲ್ಲಾಧಿಕಾರಿಗಳು ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿ ವಿಚಾರಣೆಗೆ ಅವಕಾಶವಿರುತ್ತದೆ.<br>6. ಸರ್ಕಾರಿ ಜಮೀನುಗಳಿಗೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಇಂಡೆಕ್ಸಿಂಗ್ ಅಂಡ್ ಕ್ಯಾಟಲಾಗಿಂಗ್ ಮತ್ತು ಸ್ಕ್ಯಾನಿಂಗ್ ಮಾಡಲಾಗುತ್ತಿದೆ.<br>7. ಭೂಮಿ ತಂತ್ರಾಂಶದಲ್ಲಿ ಎಲ್ಲಾ ಸರ್ಕಾರಿ ಜಮೀನುಗಳನ್ನು ಫ್ಲಾಗ್ ಮಾಡಲಾಗುತ್ತಿದೆ. ಇದರಿಂದ ಸರ್ಕಾರಿ ಜಮೀನುಗಳ ಅನಧಿಕೃತ ವಹಿವಾಟು ಮಾಡಲು ಹಾಗೂ ಅನಧಿಕೃತ ಋಣಭಾರಗಳನ್ನು ಸೃಷ್ಟಿಸಲು ಅವಕಾಶವಿರುವುದಿಲ್ಲ.<br>8. ಬೀಟ್ ತಂತ್ರಾಂಶ(Beat App): ಸರ್ಕಾರಿ ಜಮೀನುಗಳನ್ನು ಗುರುತಿಸಿ Geofencing ಮಾಡಿ ಒತ್ತುವರಿಗಳಿಂದ ರಕ್ಷಣೆ ಮಾಡುವ ಸಲುವಾಗಿ ಬೀಟ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿರುತ್ತದೆ. ಇದರಿಂದಾಗಿ ಎಲ್ಲಾ ರೀತಿಯ ಸರ್ಕಾರಿ ಜಮೀನುಗಳನ್ನು ಗುರುತಿಸಿ Geo fencing ಹದ್ದುಬಸ್ತು ಮೂಲಕ ಒತ್ತುವರಿಗಳನ್ನು ಗುರುತಿಸಲಾಗುತ್ತದೆ. ನಂತರ ಸದರಿ ಒತ್ತುವರಿಗಳನ್ನು ತೆರವುಗೊಳಿಸಲು ಮತ್ತು ತಂತ್ರಾಂಶದಲ್ಲಿ ಇಂದೀಕರಿಸಲು ಅವಕಾಶ ನೀಡಲಾಗುತ್ತದೆ. ಸದರಿ ಸರ್ಕಾರಿ ಜಮೀನುಗಳ ಅನಧಿಕೃತ ಒತ್ತುವರಿಯನ್ನು ತಡೆಗಟ್ಟಲು ಸಂಬಂಧಿಸಿದ ಅಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಸ್ಥಳ ಪರಿಶೀಲನೆ ಮಾಡಿ, ವಿಡಿಯೋ ಮಹಜರ್ ಮತ್ತು ಭಾವಚಿತ್ರಗಳನ್ನು ಅಪ್ಲೋಡ್ (Upload) ಮಾಡಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ರೀತಿಯಾಗಿ ಸರ್ಕಾರಿ ಜಮೀನುಗಳನ್ನು ರಕ್ಷಿಸಲು ನಿರಂತರ ಪರಿವೀಕ್ಷಣೆ ಹಾಗೂ ಮೇಲ್ವಿಚಾರಣೆ ಮಾಡಲು ತಂತ್ರಾಂಶವು ಸಹಾಯಕಾರಿಯಾಗಿರುತ್ತದೆ. ಸದ್ಯದಲ್ಲಿಯೇ ಬೀಟ್ ತಂತ್ರಾಂಶವನ್ನು ರಾಜ್ಯಾದ್ಯಂತ ಜಾರಿಗೊಳಿಸಲಾಗುವುದು. |

| | | |
|---|---|---|
| | | 9. ಒತ್ತುವರಿಯಿಂದ ತೆರವುಗೊಳಿಸಲಾದ ಸರ್ಕಾರಿ ಜಮೀನುಗಳಿಗೆ ಕಂದಕ, ತಂತಿಬೇಲಿ ಹಾಕಿ ಮತ್ತು ನಾಮಫಲಕ ಅಳವಡಿಸಿ ಸಂರಕ್ಷಿಸಲು ಕ್ರಮ ವಹಿಸಲಾಗುತ್ತಿದೆ.<br>10. ಖೋಟಾ ದಾಖಲೆಗಳು ಸೃಷ್ಟಿಯಾಗಿರುವಂತಹ ಪ್ರಕರಣಗಳಲ್ಲಿ ದಾಖಲೆಗಳ ನೈಜತೆ ಪರಿಶೀಲನೆಗಾಗಿ Forensic Lab ಗಳಿಗೆ (ವರ್ಷಗಳ ಅಂತರ ಗೊತ್ತಾಗುತ್ತದೆ) ಕಳುಹಿಸಲು ಕ್ರಮ ವಹಿಸಲಾಗುತ್ತಿದೆ. |
| ಇ) | ಸರ್ಕಾರಿ ಜಮೀನು ಒತ್ತುವರಿಗೆ ಸಂಬಂಧಪಟ್ಟಂತೆ ಸರ್ಕಾರ ನೇಮಕ ಮಾಡಿದ್ದ ವಿವಿಧ ಸಮಿತಿಗಳು ನೀಡಿರುವ ವರದಿಗಳು ಯಾವುವು; ಸದರಿ ವರದಿಗಳನ್ನು ಸರ್ಕಾರ ಅಂಗೀಕರಿಸಿದೆಯೇ; ವರದಿಯಲ್ಲಿ ಪ್ರಸ್ತಾಪಿಸಿರುವ ಪ್ರಮುಖ ಅಂಶಗಳೇನು; | ಸರ್ಕಾರಿ ಜಮೀನುಗಳ ಒತ್ತುವರಿ ಗುರುತಿಸಿ ಸಂರಕ್ಷಿಸಲು ಮಾರ್ಗೋಪಾಯಗಳನ್ನು ಸೂಚಿಸಲು ಎ.ಟಿ.ರಾಮಸ್ವಾಮಿಯವರ ಅಧ್ಯಕ್ಷತೆಯಲ್ಲಿ ಕರ್ನಾಟಕ ವಿಧಾನಮಂಡಲದ ಜಂಟಿ ಸದನ ಸಮಿತಿಯನ್ನು ರಚಿಸಲಾಗಿತ್ತು.<br><br>ಜಂಟಿ ಸದನ ಸಮಿತಿಯು, ಮಧ್ಯಂತರ ವರದಿಯ ಭಾಗ-1ನ್ನು ದಿನಾಂಕ:20.12.2006 ರಂದು ಹಾಗೂ ಭಾಗ-2ನ್ನು ದಿನಾಂಕ:12.07.2007ರಂದು ಮಂಡಿಸಲಾಗಿದೆ.<br><br>ಸದರಿ ಸಮಿತಿಯ ಶಿಫಾರಸ್ಸುಗಳನ್ನು ಸಿ.ಡಿ.ಯಲ್ಲಿ ನೀಡಲಾಗಿದೆ. |
| ಈ) | ಸರ್ಕಾರಿ ಜಮೀನು ಒತ್ತುವರಿಗೆ ಅನುವು ಮಾಡಿಕೊಟ್ಟ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸರ್ಕಾರಿ ಜಮೀನು ಒತ್ತುವರಿಗೆ ಸಂಬಂಧಪಟ್ಟಂತೆ, ಭೂಗಳ್ಳರ ಜೊತೆ ಶಾಮೀಲಾಗಿರುವ ಅಧಿಕಾರಿ/ ನೌಕರರುಗಳ ವಿರುದ್ಧ ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 192-ಬಿ ರಂತೆ ಕ್ರಮವಹಿಸಲಾಗುತ್ತದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 20 ಎಲ್‌ಜಿಪಿ 2020, ದಿ: 20.01.2020 ರಂತೆ ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು/ಭೂ ಕಬಳಿಕೆಗೆ ದುಷ್ಪ್ರೇರಣೆ ನೀಡಲು ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾಗಿರುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕಾನೂನು/ಶಿಸ್ತು ಕ್ರಮಗಳನ್ನು ಜರುಗಿಸಲು ಸೂಚನೆ ನೀಡಲಾಗಿದೆ. |
| ಉ) | ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಿದ ಮೇಲೆ ಆಗಿರುವ ಪ್ರಗತಿ ಏನು? (ಜಿಲ್ಲಾವಾರು ವಿವರ ನೀಡುವುದು) | ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಸಲುವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ರಚಿಸಲಾಗಿದೆ. ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲದಲ್ಲಿ, ಪ್ರಕರಣವನ್ನು ಕರ್ನಾಟಕ ಭೂ ಕಂದಾಯ ಕಾಯ್ದೆ, 1964 ಕಲಂ 192-ಎ ರನ್ವಯ ದಾಖಲಿಸಲಾಗುತ್ತಿದೆ ಹಾಗೂ ಅಕ್ರಮವಾಗಿ ಪರಭಾರೆ ಮಾಡುತ್ತಿರುವವರ ವಿರುದ್ಧ ಸಂಬಂಧಪಟ್ಟ ಪೊಲೀಸ್ |

| | | |
|---|---|---|
| | | ಠಾಣೆಯಲ್ಲಿ FIR ದಾಖಲಿಸಲಾಗುತ್ತಿದೆ.<br><br>ಜಿಲ್ಲಾಧಿಕಾರಿಗಳು ಒತ್ತುವರಿಯಾಗಿರುವ ಸರ್ಕಾರಿ ಜಮೀನುಗಳನ್ನು ಪ್ರತಿ ಮಾಹೆಯ ವಾರಾಂತ್ಯದಲ್ಲಿ ತೆರವುಗೊಳಿಸಿ ಅಂತಹ ಜಮೀನುಗಳಿಗೆ ತಂತಿಬೇಲಿ ಹಾಕಿ ಸಂರಕ್ಷಿಸಲಾಗುತ್ತಿದೆ. |

ಸಂಖ್ಯೆ: ಆರ್‌ಡಿ 8 ಎಲ್‌ಜಿಕ್ಯೂ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು

# ಅನುಬಂಧ-1

| ಕ್ರ.ಸಂ. | ಜಿಲ್ಲೆ | ರಾಜ್ಯದಲ್ಲಿ ನಡೆದಿರುವ ಸರ್ಕಾರಿ ಭೂಮಿ ಒತ್ತುವರಿ ಪ್ರಕರಣಗಳೆಷ್ಟು | ಈ ಪೈಕಿ ಒತ್ತುವರಿ ತೆರವು ಮಾಡಿ ಮರು ವಶಪಡಿಸಿಕೊಂಡಿರುವ ಭೂಮಿಯ ವಿಸ್ತೀರ್ಣ | ಈ ಭೂಮಿಯ ಒಟ್ಟು ಮೌಲ್ಯ |
|---|---|---|---|---|
| 1 | ಬೆಂಗಳೂರು ನಗರ | 15455 | 14715-25.10 | - |
| 2 | ಬೆಂಗಳೂರು ಗ್ರಾಮಾಂತರ | 8647 | 8603-00.00 | 55,91,95,000 |
| 3 | ಬಾಗಲಕೋಟೆ | 6395 | 1199-16.00 | 13,18,90,000 |
| 4 | ಬೆಳಗಾವಿ | 7146 | 2541-13.00 | 5,88,08,908 |
| 5 | ಬಳ್ಳಾರಿ | 4 | 72804-94.00 | - |
| 6 | ಬೀದರ್ | 637 | 3833-00.00 | - |
| 7 | ಚಾಮರಾಜನಗರ | 5853 | 5933-07.00 | 1,18,00,000 |
| 8 | ಚಿಕ್ಕಬಳ್ಳಾಪುರ | 6191 | 8608-32.00 | - |
| 9 | ಚಿಕ್ಕಮಗಳೂರು | 8316 | 7992-31.00 | - |
| 10 | ಚಿತ್ರದುರ್ಗ | 7470 | 1526-02.00 | - |
| 11 | ದಕ್ಷಿಣ ಕನ್ನಡ | 352 | 1968-33.00 | - |
| 12 | ದಾವಣಗೆರೆ | 2185 | 5451-30.08 | 43,60,80,000 |
| 13 | ಧಾರವಾಡ | 2014 | 2385-33.00 | 51,75,38,000 |
| 14 | ಗದಗ | 112 | 1288-03.00 | 13,52,40,000 |
| 15 | ಹಾಸನ | 34519 | 3323-13.00 | - |
| 16 | ಹಾವೇರಿ | 8293 | 62634-32.00 | 45,13,50,000 |
| 17 | ಕಲಬುರಗಿ | 70 | 7909-17.00 | - |
| 18 | ಕೊಡಗು | 916 | 05-12.00 | 36,82,000 |
| 19 | ಕೋಲಾರ | 2345 | 5945-29.00 | - |
| 20 | ಕೊಪ್ಪಳ | 1583 | 448-32.00 | |
| 21 | ಮಂಡ್ಯ | 6825 | 4714-07.00 | 67,73,70,000 |
| 22 | ಮೈಸೂರು | 627 | 13440-37.00 | - |
| 23 | ರಾಯಚೂರು | 1325 | 3620-19.00 | - |
| 24 | ರಾಮನಗರ | 565 | 2720-08.00 | 11,03,58,00,000 |
| 25 | ಶಿವಮೊಗ್ಗ | 1795 | 3973-31.00 | 12,75,45,000 |
| 26 | ತುಮಕೂರು | 5631 | 7729-01.00 | 80,23,58,200 |
| 27 | ಉತ್ತರ ಕನ್ನಡ | 3636 | 760-09.06 | 28.46.49.081 |
| 28 | ಉಡುಪಿ | 1782 | 1801-75.00 | - |
| 29 | ವಿಜಯನಗರ | 1753 | 14508-75.00 | - |
| 30 | ಯಾದಗಿರಿ | 686 | 4694-39.00 | 1197.96 ಲಕ್ಷ |
| 31 | ವಿಜಯಪುರ | 2261 | 1731-14.00 | 69,72,000 |
| | **ಒಟ್ಟು** | **145389** | **278819-10.08** | |

ಪ್ರಧಾನ ವ್ಯವಸ್ಥಾಪಕರ ಪರವಾಗಿ,
ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ
ಬೆಂಗಳೂರು

04/3